# ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು.

'ನ್ಯಾಯ ದೇಗುಲ', ಮೊದಲನೆ ಮಹಡಿ, ಹೆಚ್.ಸಿದ್ದಯ್ಯ ರಸ್ತೆ, ಬೆಂಗಳೂರು-560 027.
ದೂರವಾಣಿ ಸಂಖ್ಯೆ: 22111729, 22111875, 22111716, ಇ-ಮೇಲ್: mskar-slsa@hck.gov.in

## "ರಾಷ್ಟ್ರೀಯ ಲೋಕ್-ಅದಾಲತ್"

ದಿನಾಂಕ: **09.12.2023** ರಂದು ರಾಜ್ಯಾದ್ಯಂತ ರಾಷ್ಟ್ರೀಯ ಲೋಕ್ ಅದಾಲತ್ ಹಮ್ಮಿಕೊಳ್ಳಲಾಗಿದ್ದು, ಸದರಿ ಲೋಕ್ ಅದಾಲತ್ ನಲ್ಲಿ ಸಾರ್ವಜನಿಕರು ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಇಚ್ಛಿಸಿದಲ್ಲಿ ಮುಂಚಿತವಾಗಿ ಸಂಬಂಧಪಟ್ಟ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ತಾಲ್ಲೂಕು ಕಾನೂನು ಸೇವಾ ಸಮಿತಿಗಳನ್ನು ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು.

ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಪ್ರಕರಣ ನಡೆಯುತ್ತಿರುವ ನ್ಯಾಯಾಲಯಕ್ಕೆ ಪ್ರಕರಣ ರಾಜೀ ಮಾಡಿಕೊಳ್ಳುವ ಕುರಿತು ತಿಳಿಸುವ ಮೂಲಕ ಅಥವಾ ಅರ್ಜಿ ಸಲ್ಲಿಸುವ ಮೂಲಕ ಪ್ರಕರಣ ಇತ್ಯರ್ಥಪಡಿಸಿಕೊಳ್ಳಲು ಕೋರಲಾಗಿದೆ.

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯಚಟುವಟಿಕೆಗಳ ಬಗ್ಗೆ ಮತ್ತು ಕಾರ್ಯಕ್ರಮಗಳ ಬಗ್ಗೆ ತಿಳಿದುಕೊಳ್ಳಲು **QR Code** ಮೂಲಕ ಟೆಲಿಗ್ರಾಂ ಚಾನಲಿಗೆ ಚಂದಾದಾರರಾಗಿ.

**ಹೆಚ್ಚಿನ ಮಾಹಿತಿಗಾಗಿ:**

website : www.kslsa.kar.nic.in
ಸಹಾಯವಾಣಿ ಸಂಖ್ಯೆ: **1800-425-90900.**

ಅಥವಾ

ನಿಮ್ಮ ಹತ್ತಿರದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳು ಅಥವಾ ತಾಲ್ಲೂಕು ಕಾನೂನು ಸೇವಾ ಸಮಿತಿಯ ಸದಸ್ಯ ಕಾರ್ಯದರ್ಶಿಯವರನ್ನು ಸಂಪರ್ಕಿಸಿ

ಸಹಿ/-

(ಜೈಶಂಕರ್)
ಸದಸ್ಯ ಕಾರ್ಯದರ್ಶಿ
ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು

## ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು

### :: ಪ್ರಕಟಣೆ ::

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ವತಿಯಿಂದ ಕರ್ನಾಟಕ ರಾಜ್ಯಾದ್ಯಂತ **ದಿನಾಂಕ 09.12.2023** ರಂದು **ರಾಷ್ಟ್ರೀಯ ಲೋಕ್ ಅದಾಲತ್ ಲೋಕ್ ಅದಾಲತ್** ಆಯೋಜಿಸಲಾಗಿದೆ.

ಸಾರ್ವಜನಿಕರು ತಮ್ಮ ವ್ಯಾಜ್ಯ ಪೂರ್ವ ಹಾಗೂ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳಲ್ಲಿ ತಕ್ಷಣ ಪರಿಹಾರ ಪಡೆದುಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ.

ಲೋಕ್ ಅದಾಲತ್-ನಲ್ಲಿ ಈ ಕೆಳಗಿನ ಪ್ರಕರಣಗಳನ್ನು ರಾಜೀ ಮೂಲಕ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ.

<u>ವ್ಯಾಜ್ಯ ಪೂರ್ವ ಪ್ರಕರಣಗಳು :</u>

- ಚೆಕ್ಕು ಅಮಾನ್ಯದ ಪ್ರಕರಣಗಳು
- ಬ್ಯಾಂಕ್ ವಸೂಲಾತಿ ಪ್ರಕರಣಗಳು
- ಉದ್ಯೋಗದಲ್ಲಿ ಪುನರ್ ಸ್ಥಾಪಿಸಲ್ಪಡುವ ಪ್ರಕರಣಗಳು
- ವಿದ್ಯುತ್ ಹಾಗೂ ನೀರಿನ ಶುಲ್ಕಗಳು
- ಇತರೆ ಪ್ರಕರಣಗಳು (ರಾಜೀಯಾಗಬಲ್ಲ ಅಪರಾಧಿಕ ಪ್ರಕರಣಗಳು , ವೈವಾಹಿಕ ಪ್ರಕರಣಗಳು ಮತ್ತು ಇತರೆ ಸಿವಿಲ್ ಪ್ರಕರಣಗಳು ಇತ್ಯಾದಿ)
- ಕರ್ನಾಟಕ ರಿಯಲ್ ಎಸ್ಟೇಟ್ ಪ್ರಾಧಿಕಾರಕ್ಕೆ ಸಂಬಂಧಪಟ್ಟ ಪ್ರಕರಣಗಳು (RERA)
- ಜಿಲ್ಲಾ ಗ್ರಾಹಕರ ವೇದಿಕೆಯಲ್ಲಿನ ಪ್ರಕರಣಗಳು (Consumer Disputes)
- ಸಾಲ ವಸೂಲಾತಿ ನ್ಯಾಯಾಧೀಕರಣದ ಪ್ರಕರಣಗಳು (DRT)
- ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ (KERC)
- ಖಾಯಂ ಜನತಾ ನ್ಯಾಯಾಲಯದಲ್ಲಿನ ಪ್ರಕರಣಗಳು

<u>ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳು :</u>

- ರಾಜೀಯಾಗಬಲ್ಲ ಅಪರಾಧಿಕ ಪ್ರಕರಣಗಳು
- ಚೆಕ್ಕು ಅಮಾನ್ಯದ ಪ್ರಕರಣಗಳು
- ಬ್ಯಾಂಕ್ ವಸೂಲಾತಿ ಪ್ರಕರಣಗಳು
- ಮೋಟಾರು ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು
- ಕಾರ್ಮಿಕ ವಿವಾದಗಳು
- ವಿದ್ಯುತ್ ಹಾಗೂ ನೀರಿನ ಶುಲ್ಕಗಳು
- ವೈವಾಹಿಕ ಪ್ರಕರಣಗಳು
- ಭೂಸ್ವಾಧೀನ ಪ್ರಕರಣಗಳು
- ವೇತನ ಮತ್ತು ಭತ್ಯೆಗಳಿಗೆ ಸಂಬಂಧಿಸಿದ ಸೇವಾ ಪ್ರಕರಣಗಳು ಹಾಗೂ ಪಿಂಚಣಿ ಪ್ರಕರಣಗಳು
- ಕಂದಾಯ ಪ್ರಕರಣಗಳು
- ರಾಜೀಯಾಗಬಲ್ಲ ಸಿವಿಲ್ ಮತ್ತು ಇತರೆ ಪ್ರಕರಣಗಳು

- ನ್ಯಾಯಾಲಯಗಳಲ್ಲಿ ಉಭಯ ಪಕ್ಷಕಾರರು ರಾಜೀ ಮಾಡಿಕೊಳ್ಳಲು ಸೂಕ್ತ ಮಾರ್ಗದರ್ಶನ ಮಾಡಲಾಗುವುದು.
- ಇಬ್ಬರಿಗೂ ಒಪ್ಪಿಗೆಯಾಗುವಂತೆ ಪ್ರಕರಣವು ತೀರ್ಮಾನವಾಗುವುದರಿಂದ ಬಾಂಧವ್ಯವು ಉಳಿದು ವಿವಾದವು ತೀರ್ಮಾನವಾಗುತ್ತದೆ.
- ನ್ಯಾಯಾಲಯದಲ್ಲಿ ದಾಖಲಾಗದೇ ಇರುವ ಪ್ರಕರಣಗಳನ್ನು ಸಹ ರಾಜೀ ಸಂಧಾನದ ಮೂಲಕ ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.
- ರಾಜೀ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಂಡಲ್ಲಿ ನ್ಯಾಯಾಲಯಕ್ಕೆ ಪಾವತಿಸಲಾದ ನ್ಯಾಯಾಲಯ ಶುಲ್ಕವನ್ನು ಪೂರ್ಣವಾಗಿ ಮರುಪಾವತಿಸಲಾಗುವುದು.
- ಸಂಧಾನಕಾರರು ಸೂಚಿಸುವ ಪರಿಹಾರ ಒಪ್ಪಿಗೆಯಾದಲ್ಲಿ ಮಾತ್ರ ರಾಜೀ ಮಾಡಿಕೊಳ್ಳಬಹುದು
- ಕಡಿಮೆ ಖರ್ಚಿನಲ್ಲಿ ಶೀಘ್ರ ತೀರ್ಮಾನಕ್ಕಾಗಿ ಇದೊಂದು ವಿಶೇಷ ಅವಕಾಶವಾಗಿದೆ.

**ವಿಶೇಷ ಸೂಚನೆ :** ಪ್ರತಿದಿನ ರಾಜ್ಯದ ಎಲ್ಲಾ ನ್ಯಾಯಾಲಯಗಳಲ್ಲಿ ಲೋಕ್ ಅದಾಲತ್ ಗೆ ಸಂಬಂಧಿಸಿದಂತೆ ಪೂರ್ವಭಾವಿ ಬೈಠಕ್ ಗಳು ಭೌತಿಕ ಹಾಗೂ ವಿಡಿಯೋ ಕಾನ್ಫರೆನ್ಸ್ ಮೂಲಕ ನಡೆಯುತ್ತಲಿವೆ.

<u>**ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ :**</u>

ಟೋಲ್ ಫ್ರಿ ಸಂಖ್ಯೆ: **1800-425-90900**

**"ನ್ಯಾಯ ದೇಗುಲ", ಮೊದಲನೆ ಮಹಡಿ, ಹೆಚ್ಚ ಸಿದ್ಧಯ್ಯ ರಸ್ತೆ, ಬೆಂಗಳೂರು**

ದೂರವಾಣಿ ಸಂಖ್ಯೆ: **080-22111875, 080-22111730, website: www.kslsa.kar.nic.in**

ಸಹಿ/-

**(ಜೈಶಂಕರ್)**

ಸದಸ್ಯ ಕಾರ್ಯದರ್ಶಿ

**ಈ ಕೆಳಕಂಡ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಾರ್ಯಾಲಯಕ್ಕೆ ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯದ ಕಾನೂನು ಸೇವಾ ಸಮಿತಿಗಳನ್ನು ಸಂಪರ್ಕಿಸಬಹುದು.**

| | |
|---|---|
| ಉಚ್ಚ ನ್ಯಾಯಾಲಯ ಕಾನೂನು ಸೇವೆಗಳ ಸಮಿತಿ, ಬೆಂಗಳೂರು | 080-22869987<br>080-22869988<br>080-22954809 |
| ಉಚ್ಚ ನ್ಯಾಯಾಲಯ ಕಾನೂನು ಸೇವೆಗಳ ಸಮಿತಿ, ಧಾರವಾಡ | 0836-2485242 |
| ಉಚ್ಚ ನ್ಯಾಯಾಲಯ ಕಾನೂನು ಸೇವೆಗಳ ಸಮಿತಿ, ಕಲಬುರಗಿ | 08472-264141 |

| | | | |
|---|---|---|---|
| ಬೆಂಗಳೂರು ನಗರ | 080-22215143 | ಬೆಂಗಳೂರು (ಗ್ರಾ) | 080-22222919 |
| ಬಾಗಲಕೋಟೆ | 08354-235876 | ಬಳ್ಳಾರಿ | 08392-278077 |
| ಬೆಳಗಾವಿ | 0831-2423216 | ಬೀದರ | 08482-226116 |
| ಚಾಮರಾಜನಗರ | 08226-226022 | ಚಿಕ್ಕಬಳ್ಳಾಪುರ | 08156-275080 |
| ಚಿಕ್ಕಮಗಳೂರು | 08262-295321 | ಚಿತ್ರದುರ್ಗ | 08194-222322 |
| ಮಂಗಳೂರು (ದ.ಕ.) | 0824-2448111 | ದಾವಣಗೆರೆ | 08192-296364 |
| ಧಾರವಾಡ | 0836-2740128 | ಗದಗ | 08372-232534 |
| ಹಾಸನ | 08172-268356 | ಹಾವೇರಿ | 08375-233939 |
| ಕಲಬುರಗಿ | 08472-253370 | ಕೊಡಗು (ಮಡಿಕೇರಿ) | 08272-222373 |
| ಕೋಲಾರ | 08152-228811 | ಕೊಪ್ಪಳ | 08539-220233 |
| ಮಂಡ್ಯ | 08232-229345 | ಮೈಸೂರು | 0821-2330040<br>0821-2330130 |
| ರಾಯಚೂರು | 08532-228476 | ರಾಮನಗರ | 080-27273445 |
| ಶಿವಮೊಗ್ಗ | 08182-222218 | ತುಮಕುರು | 0816-2255133 |
| ಉಡುಪಿ | 0820-2523355 | ಕಾರವಾರ | 08382-222990 |
| ವಿಜಯಪುರ | 08352-276150 | ಯಾದಗಿರಿ | 08473-253243 |
| **ಖಾಯಂ ಜನತಾ ನ್ಯಾಯಾಲಯಗಳ ಕಾರ್ಯಾಲಯದ ದೂರವಾಣಿ ಸಂಖ್ಯೆಗಳು :** | | | |
| ಬೆಂಗಳೂರು | 080-22111726 | ಕಲಬುರಗಿ | 08472-255364 |
| ಬೆಳಗಾವಿ | 0831-2422300 | ಮೈಸೂರು | 0821-2330130 |
| ಧಾರವಾಡ | 0836-2442282 | ಮಂಗಳೂರು (ದ.ಕ.) | 0824-2455349 |

ಸಹಿ/-

**(ಜೈಶಂಕರ್)**

ಸದಸ್ಯ ಕಾರ್ಯದರ್ಶಿ

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು